ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ:ಶೈವಿ:44:ಸ್ವಾ.ಅ.ಮ:2022-23 ದಿನಾಂಕ:03.08.2022.

**ಸುತ್ತೋಲೆ**

ವಿಷಯ: 'ಆಜಾದಿ ಕಾ ಅಮೃತ ಮಹೋತ್ಸವ' ಕಾರ್ಯಕ್ರಮದ ಅಂಗವಾಗಿ "ಐತಿಹಾಸಿಕ ದಾಖಲೆಗಳ ಹಾಗೂ ಛಾಯಾಚಿತ್ರಗಳ ಪ್ರದರ್ಶನ"ಕ್ಕೆ ವಿದ್ಯಾರ್ಥಿಗಳನ್ನು ಕಳುಹಿಸುವ ಬಗ್ಗೆ.

ಉಲ್ಲೇಖ: ನಿರ್ದೇಶಕರು(ಪ್ರ) ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಧಾನಸೌಧ, ಬೆಂಗಳೂರು, ರವರ ಪತ್ರ ಸಂಖ್ಯೆ:KSA-12015/29/2022-KSA-HRS-KSA DT: 02.08.2022.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆಯ ವತಿಯಿಂದ 'ಆಜಾದಿ ಕಾ ಅಮೃತ ಮಹೋತ್ಸವ' ಕಾರ್ಯಕ್ರಮದ ಅಂಗವಾಗಿ "ಐತಿಹಾಸಿಕ ದಾಖಲೆಗಳ ಹಾಗೂ ಛಾಯಾಚಿತ್ರಗಳ ಪ್ರದರ್ಶನ' ವನ್ನು ದಿನಾಂಕ:10.08.2022 ರಿಂದ 12.08.2022ರ ವರೆಗೆ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದು, ಸದರಿ ಕಾರ್ಯಕ್ರಮವನ್ನು ರಾಜ್ಯದ ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದು ಹಾಗೂ ಇಲಾಖಾ ಸಚಿವರು ಉಪಸ್ಥಿತಲಿರುತ್ತಾರೆ. ಪ್ರದರ್ಶನಗೊಳ್ಳುವ ಐತಿಹಾಸಿಕ ದಾಖಲೆಗಳು ನಾಡಿನ ಸಾಂಸ್ಕೃತಿಕ ಚರಿತ್ರೆಗೆ ಸಂಬಂಧಿಸಿರುವುದರಿಂದ ಪದವಿ ಹಂತದ ವಿದ್ಯಾರ್ಥಿಗಳಿಗೆ ಮಹತ್ವದ ಜ್ಞಾನಾರ್ಜನೆಗೆ ಪೂರಕವಾಗಲಿರುವುದರಿಂದ ಪದವಿ ಕಾಲೇಜಿನ ವಿದ್ಯಾರ್ಥಿಗಳು ಪ್ರದರ್ಶನ ಕಾರ್ಯಕ್ರಮ ವೀಕ್ಷಿಸಲು ಕ್ರಮ ಕೈಗೊಳ್ಳುವಂತೆ ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ.

ಈ ಸಂಬಂಧ, ಬೆಂಗಳೂರು ನಗರ ವ್ಯಾಪ್ತಿಗೊಳಪಡುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ವಿದ್ಯಾರ್ಥಿಗಳನ್ನು ಕಾಲೇಜಿನ ಪ್ರಾಧ್ಯಾಪಕರ ಉಸ್ತುವಾರಿಯಲ್ಲಿ ಪ್ರದರ್ಶನ ಕಾರ್ಯಕ್ರಮ ವೀಕ್ಷಿಸಲು ಕ್ರಮ ವಹಿಸುವಂತೆ ಸೂಚಿಸಲಾಗಿದೆ. ಹಾಗೂ ವಿಧಾನಸೌಧ ಪ್ರವೇಶಿಸಲು ಗುರುತಿನ ಚೀಟಿ ಕಡ್ಡಾಯವಾಗಿರುವುದರಿಂದ ನಿಯೋಜಿಸುವ ಕಾಲೇಜಿನ ವಿದ್ಯಾರ್ಥಿಗಳ ವಿವರ ಪಟ್ಟಿಯನ್ನು ಮುಂಚಿತವಾಗಿ ನಿರ್ದೇಶಕರು(ಪ್ರ) ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ಕೊಠಡಿ ಸಂಖ್ಯೆ:126, ಮೊದಲನೇ ಮಹಡಿ, ವಿಕಾಸಸೌಧ, ಬೆಂಗಳೂರು, ರವರಿಗೆ ಕಳುಹಿಸಿ ಗುರುತಿನ ಚೀಟಿಯನ್ನು ಪಡೆಯುವಂತೆ ಸೂಚಿಸಲಾಗಿದೆ.

5/13- (ಸಹಿ)

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ: ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಬೆಂಗಳೂರು ನಗರ ವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ –
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಕಾಳಿದಾಸ ರಸ್ತೆ, ಬೆಂಗಳೂರು.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
4. ಕಛೇರಿ ಪ್ರತಿ.